ತೀರ್ಥಹಳ್ಳಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಕ್ರೀಡಾಂಗಣ

405(872) ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ) ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತೀರ್ಥಹಳ್ಳಿ ಪಟ್ಟಣದಲ್ಲಿ ನಿರ್ಮಾಣಗೊಳ್ಳುತ್ತಿರುವ ಕ್ರೀಡಾಂಗಣಕ್ಕೆ ಈವರೆಗೆ ತಗುಲಿರುವ ವೆಚ್ಚವೆಷ್ಟು; ಪ್ರಾರಂಭ ಮಾಡಿದ್ದು ಯಾವಾಗ; ಈಗ ಇದು ಯಾವ ಹಂತದಲ್ಲಿದೆ;

ಆ) ಮೇಲ್ಕಂಡ ಕ್ರೀಡಾಂಗಣ ಪೂರ್ಣಗೊಳ್ಳಲು ಎಷ್ಟು ಸಮಯ ಹಾಗೂ ಎಷ್ಟು ಹಣ ಬೇಕಾಗುವುದು;

ಇ) ಕ್ರೀಡಾಂಗಣ ಪೂರ್ಣಗೊಳ್ಳಲು ಸರ್ಕಾರಕ್ಕಿರುವ ತೊಡಕುಗಳೇನು?

ಜಿ. ಜರ್ನಾರ್ಧನ ರೆಡ್ಡಿ (ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನಸೇವೆ ಸಚಿವರು)

ಅ) ಈವರೆಗೂ ತಗುಲಿರುವ ವೆಚ್ಚ ರೂ. 67.08 ಲಕ್ಷಗಳು ಪ್ರಾರಂಭಿಸಿದ ದಿನಾಂಕ 8–1–2007. ಪೆವಿಲಿಯನ್ ಕಟ್ಟಡ ಕಾಮಗಾರಿ ಮುಕ್ತಾಯ ಹಂತ ತಲುಪಿದೆ. ನೆಲಸಮತಟ್ಟು ಕಾಮಗಾರಿ ಪ್ರಗತಿಯಲ್ಲಿದೆ.

ಆ) ಸುಮಾರು 2 ತಿಂಗಳುಗಳ ಕಾಲಾವಕಾಶ ಬೇಕಾಗುವುದು. ಅಂದಾಜು ಪಟ್ಟಿಯ ಪ್ರಕಾರ ಈಗಾಗಲೇ ಅನುದಾನ ಬಿಡುಗಡೆ ಮಾಡಲಾಗಿದೆ.

ಇ) ಯಾವುದೇ ತೊಡಕುಗಳು ಇಲ್ಲ.

ರಾಜ್ಯ ಸರ್ಕಾರದ ಆರ್ಥಿಕ ವ್ಯವಸ್ಥೆ

406(917) ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರಕ್ಕೆ ಕೇಂದ್ರ ಸರ್ಕಾರದಿಂದ ದಿನಾಂಕ 1–4–2008 ರಿಂದ 31–1–2011ರವರೆಗೆ ಪ್ರತಿ ತಿಂಗಳು ಜಮಾ ಆದ ಹಣವೆಷ್ಟು; ಯಾವ ಯಾವ ಇಲಾಖೆಯಿಂದ ಯಾವ ಯಾವ ಇಲಾಖೆಗೆ ಜಮಾ ಆಗಿದೆ; (ವಿವರ ನೀಡುವುದು)